ECA No.10/2017

RW-1 ಪ್ರಸಾದ್ ಚಲುವಾದಿ

Date: 26.03.2026

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ 2 ನೇ ಎದುರುದಾರರ ಪರ ಶ್ರೀ ಬಿ ಟಿ ವಕೀಲರಿಂದಃ**

**ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.**

ಸಾಕ್ಷಿಗೆ ನೀಡಿದ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದ ಅದನ್ನು ನಿಆರ್ 1 ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಅರ್ಜಿದಾರರ ಪರ ಶ್ರೀ ಡಿ ಆರ್ ಆರ್ ವಕೀಲರಿಂದ**

ಅಪಘಾತಕ್ಕೀಡಾದ ವಾಹನ ನಮ್ಮ ಕಂಪನಿಯ ವಿಮೆಗೆ ಒಳಪಟ್ಟಿತ್ತು ಎಂದರೆ ಸರಿ. ಅಪಘಾತವಾದ ಸಮಯದಲ್ಲಿ ಸದರಿ ವಿಮೆ ಚಾಲ್ತಿಯಲ್ಲಿತ್ತು ಎಂದರೆ ಸರಿ. ಅಪಘಾತವಾದ ಸಮಯದಲ್ಲಿ ಚಾಲಕನಿಗೆ ಚಾಲನಾ ಪರವಾನಿಗೆ ಪತ್ರ ಚಾಲ್ತಿಯಲ್ಲಿತ್ತು ಎಂದರೆ ಸರಿಯಲ್ಲ. ಅಪಘಾತವಾದ ಸಮಯದಲ್ಲಿ ಸದರಿ ವಾಹನ ನಮ್ಮ ಕಂಪನಿಯ ವಿಮೆಗೆ ಒಳಪಟ್ಟಿರುವ ಕಾರಣ ಮತ್ತು ಚಾಲಕನಿಗೆ ಚಾಲನಾ ಪರವಾನಿಗೆ ಪತ್ರ ಇದ್ದ ಕಾರಣ ನಮ್ಮ ಕಂಪನಿ ಪರಿಹಾರದ ಹಣವನ್ನು ಕೊಡುವ ಬಾಧ್ಯಸ್ಥಿಕೆಯನು ಹೊಂದಿದೆ ಎಂದರೆ ಸರಿಯಲ್ಲ. ಅರ್ಜಿದಾರರು ಯಾವುದೇ ವಿಮಾ ಷರತ್ತನ್ನು ಉಲ್ಲಂಘನೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಪರಿಹಾರದ ಹಣವನ್ನು ಕೊಡುವ ಬಾಧ್ಯಸ್ತಿಕೆಯಿಂದ ತಪ್ಪಿಸಿಕೊಳ್ಳಲು ನಾನು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇರುವುದಿಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು). ಓ.ಹೇ.ಕೇ.ಸ. ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಚಳ್ಳಕೆರೆ